ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ವೈದ್ಯರ ಹುದ್ದೆಗಳು - 19
ದೌದಿಯರು - 03
ಲ್ಯಾಬ್ ಟೆಕ್ನಿಷಿಯನ್ - 09
ಸಹಾಯಕರು ಮತ್ತು ಜವಾನರು - 06
(ತಾಲ್ಲೂಕುವಾರು ಪಟ್ಟಿ ಲಗತ್ತಿಸಿದೆ)

ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್-ಎ ಶ್ರೇಣಿಯಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಯನ್ನು ವಿಶೇಷ ನೇಮಕಾತಿ ಸಮಿತಿಯಿಂದ 550 ವೈದ್ಯರ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟವಾಗಿದ್ದು, ಅಂತಿಮ ಪಟ್ಟಿ ಪ್ರಕಟವಾದ ಕೂಡಲೇ ಭರ್ತಿ ಮಾಡಲಾಗುವುದು. 80 ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಇಷ್ಟರಲ್ಲಿಯೇ ಭರ್ತಿ ಮಾಡಲಾಗುವುದು. ಜಿಲ್ಲಾಧಿಕಾರಿಗಳಿಗೆ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ, ಗೌರವ ಧನದ ಆಧಾರದ ಮೇಲೆ ನಿವೃತ್ತಿ ಸರ್ಕಾರಿ ತಜ್ಞ ವೈದ್ಯರನ್ನು ಹಾಗೂ ಖಾಸಗಿ ಸಮಾಲೋಚಕರನ್ನು ನೇಮಕ ಮಾಡಲು ಅಧಿಕಾರ ನೀಡಲಾಗಿದೆ.

29 ವಿವಿಧ ವೃಂದದ ಸುಮಾರು 6000 ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ವಿಶೇಷ ನಿಯಮಗಳನ್ನು ರೂಪಿಸಲಾಗಿದೆ.

ಇ) ಸದ್ಯದಲ್ಲಿಯೇ ಪ್ರಾರಂಭವಾಗಲಿದೆ.

ಸ್ವರ್ಣ ರೋಜಗಾರ್ ಯೋಜನೆಗೆ ಕೇಂದ್ರ ಸರ್ಕಾರದಿಂದ ಬಂದ ಹಣ

1732 (2030) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2001-02ನೇ ಸಾಲಿನಲ್ಲಿ ರಾಜ್ಯದ ಜಿಲ್ಲಾ ಪಂಚಾಯತ್‌ಗಳಿಗೆ ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ ಅನುಷ್ಠಾನಕ್ಕಾಗಿ ಕೇಂದ್ರ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಬಿಡುಗಡೆಯಾಗಿರುವ ಹಣ ಎಷ್ಟು;

ಆ) ಈ ಹಣ ಬಿಡುಗಡೆಗಾಗಿ ಯಾವ ಯಾವ ಜಿಲ್ಲೆಗಳು ಯೋಜನಾ ಪ್ರಸ್ತಾವನೆಗಳನ್ನು ಕಳುಹಿಸಿದ್ದವು; ಇನ್ನುಳಿದ ಜಿಲ್ಲೆಗಳು ಪ್ರಸ್ತಾವನೆಗಳನ್ನು ಕಳುಹಿಸದಿರಲು ಕಾರಣವೇನು; (ಜಿಲ್ಲೆಗಳ ವಿವರ ನೀಡುವುದು)

ಇ) ನಿರ್ಲಕ್ಷ ಮಾಡಿರುವ ಈ ಜಿಲ್ಲಾ ಪಂಚಾಯತ್‌ಗಳ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು;

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) 2001-02ನೇ ಸಾಲಿನಲ್ಲಿ ರಾಜ್ಯದ ಜಿಲ್ಲಾ ಪಂಚಾಯತ್‌ಗಳಿಗೆ ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ ಅನುಷ್ಠಾನಕ್ಕಾಗಿ ಕೇಂದ್ರ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರೂ. 1659.33 ಲಕ್ಷ ಬಿಡುಗಡೆಯಾಗಿದೆ.

ಆ) ಕೊಡಗು ಜಿಲ್ಲೆಯನ್ನು ಹೊರತುಪಡಿಸಿ ಉಳಿದೆಲ್ಲಾ ಜಿಲ್ಲೆಗಳು ಪ್ರಸ್ತಾವನೆಗಳನ್ನು ಕಳುಹಿಸಿದ್ದವು.

ಕೊಡಗು ಜಿಲ್ಲೆಯ ಭೌಗೋಳಿಕ ಸನ್ನಿವೇಶ ಹಾಗೂ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಕಡಿಮೆ ಇದ್ದು ಹೆಚ್ಚಿನ ಪ್ರಗತಿ ಸಾಧಿಸಲು ಆಗಿರುವುದಿಲ್ಲ. ಇದಲ್ಲದೆ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳೂ ಸಹ ಬ್ಯಾಂಕ್‌ನಿಂದ ಸಾಲ ಪಡೆಯುವಂತಹ ಯೋಜನೆಗಳನ್ನು ತೆಗೆದುಕೊಳ್ಳಲು ಇಚ್ಛಿಸುವುದಿಲ್ಲ. ಈ ಕಾರಣದಿಂದ ಕೊಡಗು ಜಿಲ್ಲೆಯು ಪ್ರಸ್ತಾವನೆಯನ್ನು ಕಳುಹಿಸಿಲ್ಲ.

ಇ) ಉದ್ಭವಿಸುವುದಿಲ್ಲ.

ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ವಿಶೇಷ ವೈದ್ಯಕೀಯ ಉಪಕರಣಗಳ ಅಳವಡಿಕೆ

1735 (964) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಹಾಲಿ ಎಷ್ಟು ಹಾಸಿಗೆಗಳ ವ್ಯವಸ್ಥೆಯಿದೆ;

ಆ) ಈ ಆಶ್ಪತ್ರೆಯಲ್ಲಿ ಹಾಸಿಗೆ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ಆಸ್ಪತ್ರೆಯಲ್ಲಿ ಹೊಸದಾಗಿ ವಿಶೇಷ ವೈದ್ಯಕೀಯ ಉಪಕರಣಗಳನ್ನು ಅಳವಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಈ) 2002-2003ನೇ ಸಾಲಿನಲ್ಲಿ ಈ ಆಸ್ಪತ್ರೆಯ ಅಭಿವೃದ್ಧಿಗಾಗಿ ಸರ್ಕಾರ ಕೈಗೊಳ್ಳಲಿರುವ ಕಾರ್ಯಕ್ರಮಗಳೇನು;

ಉ) ರೋಗಿಗಳ ಸಂಬಂಧಿಕರು ತಂಗಲು ಅನುಕೂಲವಾಗುವಂತೆ ಒಂದು ಧರ್ಮಶಾಲೆಯನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಹಾಲಿ 250 ಹಾಸಿಗೆಗಳ ಸೌಲಭ್ಯ ಇರುತ್ತದೆ.

ಆ) ಹಂತ ಹಂತವಾಗಿ ಹಾಸಿಗೆಗಳ ಸಂಖ್ಯೆಯನ್ನು 519 ರವರೆಗೆ ಹೆಚ್ಚಿಸಲು ಉದ್ದೇಶಿಸಿದೆ.

ಇ) ಈಗಾಗಲೇ ಈ ನೂತನ ಆಸ್ಪತ್ರೆಯಲ್ಲಿ ಈ ಕೆಳಕಂಡ ವಿಶೇಷ ವೈದ್ಯಕೀಯ ಸೌಲಭ್ಯಗಳು ಉಪಕರಣಗಳನ್ನು ಅಳವಡಿಸಲಾಗಿದೆ.

1. ಹಿಲ್‌ರಾಮ್ ಸೆಂಚುರಿ ಬೆಡ್ಸ್.
2. ಸರ್ಜಿಕಲ್ ಸ್ಕ್ಯೂಬ್
3. ಓ.ಟಿ. ಲೈಟ್ಸ್
4. ಸಿ.ಸಿ.ಟಿ.ವಿ. ಸಿಸ್ಟಮ್
5. ಸ್ವಿಂಗ್ ಲ್ಯಾಬ್
6. ಜೂಸ್ಟ್ ಹೆಚ್.ಎಲ್ 20 ಹಾರ್ಟ್ ಲಂಗ್‌ಮೆಷಿನ್

ಈ) 2002-2003ನೇ ಸಾಲಿನಲ್ಲಿ ಈ ಆಸ್ಪತ್ರೆಯ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.